ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭೆ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 19/11/20

## ರಾಜ್ಯಸಭೆಗೆ ನಾರಾಯಣ್ ನಾಮಪತ್ರ



**ಬೆಂಗಳೂರು:** ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಯ ಒಂದು ಸ್ಥಾನಕ್ಕೆ ನಡೆಯಲಿರುವ ಚುನಾವಣೆಗೆ ನಾಮಪತ್ರ ಸಲ್ಲಿಕೆಗೆ ಅಂತಿಮ ದಿನವಾಗಿದ್ದ ಬುಧವಾರ ಬಿಜೆಪಿ ಅಭ್ಯರ್ಥಿ ಕೆ.ನಾರಾಯಣ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದು ಬಹುತೇಕ ಅವಿರೋಧ ಆಯ್ಕೆಯಾಗುವ ಸಾಧ್ಯತೆಯಿದೆ.

ಪಕ್ಷದ ನಾಯಕರ ಜತೆ ಆಗಮಿಸಿದ ನಾರಾಯಣ್ ಚುನಾವಣಾಧಿಕಾರಿಯೂ ಆಗಿರುವ ವಿಧಾನಸಭೆ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಕೆ ಮಾಡಿದರು. ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್, ಸಚಿವರಾದ ಕೆ.ಎಸ್. ಈಶ್ವರಪ್ಪ, ನಾರಾಯಗೌಡ, ಶಾಸಕ ಸುನಿಲ್ ಕುಮಾರ್ ಉಪಸ್ಥಿತರಿದ್ದರು.

ನಾಮಪತ್ರ ಸಲ್ಲಿಕೆಗೆ ಬುಧವಾರ ಕೊನೆಯ ದಿನವಾಗಿತ್ತು. ಕಾಂಗ್ರೆಸ್ ಹಾಗೂ ಜೆಡಿಎಸ್‌ನಿಂದ ಯಾರೊಬ್ಬರೂ ನಾಮಪತ್ರ ಸಲ್ಲಿಸಿಲ್ಲ. ಲಿಂಗಸಗೂರು ಗ್ರಾಪಂ ಮಾಜಿ ಸದಸ್ಯ ಸುಧಾಕರ್ ಎಂಬುವರು ಬಿಜೆಪಿ ಅಭ್ಯರ್ಥಿ ಎಂದು ನಾಮಪತ್ರ ಸಲ್ಲಿಸಿದ್ದಾರಾದರೂ ಸೂಚಕರು ಹಾಗೂ ಅನುಮೋದಕರು ಇರಲಿಲ್ಲ.